ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು-12

ಇ-ಮೇಲ್: commissioner.pue@gmail.com ದೂರವಾಣಿ ಸಂಖ್ಯೆ: 080-23561944


ಸಂಖ್ಯೆ: ಪಪೂಶಿಇ/ಪರೀಕ್ಷೆ/SC.RV.RT/01/2021-22 ದಿನಾಂಕ: /06/2022

# ಸುತ್ತೋಲೆ

**ವಿಷಯ:** ಏಪ್ರಿಲ್/ಮೇ 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್ಡ್ ಪ್ರತಿ ಪಡೆಯಲು ಹಾಗೂ ಮರುಮೌಲ್ಯಮಾಪನ ಮತ್ತು ಮರುಎಣಿಕೆಗಾಗಿ ಅರ್ಜಿ ಸಲ್ಲಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಇಡಿ 195 ಡಿಜಿಡಿ 2017, ಬೆಂಗಳೂರು, ದಿನಾಂಕ: 20/03/2018.

* * * * *

ಕರ್ನಾಟಕ ಪ್ರೀ ಯೂನಿವರ್ಸಿಟಿ ಕೋರ್ಸ್ ಸ್ಟೇಟ್ ಲೆವೆಲ್ ಪರೀಕ್ಷಾ ನಿಯಮಾವಳಿ 1997ರ ನಿಯಮ 29(1) ಹಾಗೂ 30(1)ರ ಪ್ರಕಾರ ದ್ವಿತೀಯ ಪಿಯುಸಿ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ಡ್ ಪ್ರತಿ ಪಡೆಯಲು, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಸದರಿ ಕಾರಣಕ್ಕಾಗಿ ಏಪ್ರಿಲ್/ಮೇ 2022ರ ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳು ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಮಾಡಿಕೊಡಲಾಗಿದೆ.

## ವಿದ್ಯಾರ್ಥಿಗಳಿಗೆ ವಿಶೇಷ ಸೂಚನೆಗಳು:

1. ವಿದ್ಯಾರ್ಥಿಗಳು ಉತ್ತರ ಪತ್ರಿಕೆಯ ಸ್ಕ್ಯಾನ್ಡ್ ಪ್ರತಿಗಳಿಗೆ ಅರ್ಜಿ ಸಲ್ಲಿಸಿ ಪಡೆದ ವಿಷಯಗಳಿಗೆ ಮಾತ್ರ ಮರುಮೌಲ್ಯಮಾಪನ / ಮರುಎಣಿಕೆಗಾಗಿ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.
2. ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಿರುವ ವಿಷಯಗಳಿಗೆ ಮರುಎಣಿಕೆಗೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.
3. ಆನ್‌ಲೈನ್‌ನಲ್ಲಿ ಮಾತ್ರ ಅರ್ಜಿ ಸಲ್ಲಿಸಬೇಕು, ಹೊರತುಪಡಿಸಿ ಇನ್ನಾವುದೇ ವಿಧಾನಗಳಲ್ಲಿ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.
4. ನಿಗದಿಯಾಗಿರುವ ಶುಲ್ಕವನ್ನು ಆನ್‌ಲೈನ್ ಮೂಲಕ ಬೆಂಗಳೂರು ಒನ್, ಕರ್ನಾಟಕ-ಒನ್ ಅಥವಾ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ(ಕಾರ್ಪೋರೇಷನ್ ಬ್ಯಾಂಕ್)ಗಳ ರಾಜ್ಯದ ಯಾವುದೇ ಶಾಖೆಯ ಮೂಲಕ ಮಾತ್ರ ಪಾವತಿ ಮಾಡಲು ಅವಕಾಶವಿರುತ್ತದೆ.
5. ಉಲ್ಲೇಖಿತ ಸರ್ಕಾರದ ಆದೇಶದಂತೆ ಸ್ಕ್ಯಾನ್ಡ್ ಪ್ರತಿ ಹಾಗೂ ಮರುಮೌಲ್ಯಮಾಪನಕ್ಕಾಗಿ ಈ ಕೆಳಕಂಡಂತೆ ಶುಲ್ಕಗಳನ್ನು ನಿಗದಿಪಡಿಸಲಾಗಿದೆ.

**ಶುಲ್ಕಗಳ ವಿವರ**

| | | |
|---|---|---|
| ಸ್ಕ್ಯಾನ್ಡ್ ಪ್ರತಿಗಾಗಿ ಅರ್ಜಿ ಸಲ್ಲಿಸಲು | ಪ್ರತಿ ವಿಷಯಕ್ಕೆ | ರೂ 530/- |
| ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು | ಪ್ರತಿ ವಿಷಯಕ್ಕೆ | ರೂ 1670/- |
| ಅಂಕಗಳ ಮರುಎಣಿಕೆಗಾಗಿ | ಯಾವುದೇ ಶುಲ್ಕ ಇರುವುದಿಲ್ಲ | |

## ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕ

| ಪ್ರಕ್ರಿಯೆಯ ವಿವರ | ರಿಂದ | ವರೆಗೆ |
|---|---|---|
| ಸ್ಕ್ಯಾನ್ಡ್ ಪ್ರತಿಗಾಗಿ ಅರ್ಜಿ ಸಲ್ಲಿಸುವ ದಿನಾಂಕ | 18-06-2022 | 30-06-2022 |
| ಸ್ಕ್ಯಾನ್ಡ್ ಪ್ರತಿ ಡೌನ್‌ಲೋಡ್ ಮಾಡಿಕೊಳ್ಳಲು ಪ್ರಾರಂಭ ಹಾಗೂ ಕೊನೆಯ ದಿನಾಂಕ | 06-07-2022 | 10-07-2022 |
| ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಹಾಗೂ ಮರುಎಣಿಕೆಗಾಗಿ ಅರ್ಜಿ ಸಲ್ಲಿಸಲು(ಸ್ಕ್ಯಾನ್ಡ್ ಪ್ರತಿ ತೆಗೆದುಕೊಂಡವರಿಗೆ ಮಾತ್ರ ಅವಕಾಶವಿರುತ್ತದೆ) | 07-07-2022 | 13-07-2022 |

## I ಉತ್ತರ ಪತ್ರಿಕೆಗಳ ಸ್ಕ್ಯಾನ್ಡ್ ಪ್ರತಿ ಪಡೆಯಲು ಅರ್ಜಿ ಸಲ್ಲಿಸುವ ವಿಧಾನ

1. ಇಲಾಖೆಯ ವೆಬ್‌ಸೈಟ್ www.pue.karnataka.gov.in ರಲ್ಲಿನ ಮುಖಪುಟ (HOME PAGE)ದಲ್ಲಿ Link (Application for Scanned copies, Re-valuation / Re-totalling) ಎಂದು ಇರುತ್ತದೆ.
2. Link ಅನ್ನು ಕ್ಲಿಕ್ ಮಾಡಿದರೆ Calender of Events ಪುಟ ತೆರೆಯುತ್ತದೆ. ಇದರಲ್ಲಿ "How to Apply" ಅನ್ನು ಕಡ್ಡಾಯವಾಗಿ ಓದಿ ತಿಳಿದುಕೊಳ್ಳುವುದು.
3. ದ್ವಿತೀಯ ಪಿಯುಸಿ 2022ರ ವಾರ್ಷಿಕ ಪರೀಕ್ಷೆಯ ನೋಂದಣಿ ಸಂಖ್ಯೆ (Register Number)ಯನ್ನು ಪ್ರವೇಶ ಪತ್ರದಲ್ಲಿರುವಂತೆ ನಮೂದಿಸಬೇಕು. ತಕ್ಷಣವೇ ವಿದ್ಯಾರ್ಥಿಗಳ ಮಾಹಿತಿ display ಆಗುತ್ತದೆ.
4. Scanned copy ಪಡೆಯಲು ಇಚ್ಛಿಸಿದ ವಿಷಯ/ ವಿಷಯಗಳನ್ನು ಒಂದೇ ಬಾರಿಗೆ ಆಯ್ಕೆ ಮಾಡಿಕೊಂಡು ವಿದ್ಯಾರ್ಥಿಯ/ ಪೋಷಕರ ನಿಖರವಾದ ಮೊಬೈಲ್ ಸಂಖ್ಯೆ, ತಮ್ಮ ಖಾಸಗಿ ಇ-ಮೇಲ್ ಐಡಿ ಹಾಗೂ ಸ್ವ-ವಿಳಾಸವನ್ನು ಮಾತ್ರ ನಮೂದಿಸಬೇಕು. ನಂತರ Submit ಬಟನ್ ಕ್ಲಿಕ್ ಮಾಡಿದ ಕೂಡಲೇ ಚಲನ್ ಸಂಖ್ಯೆಯು Auto-Generate ಆಗುತ್ತದೆ.
5. "Make payment" ಬಟನ್ ಕ್ಲಿಕ್ ಮಾಡಿದ ನಂತರ "Cash payment" ಅಥವಾ "Online payment"ನಲ್ಲಿ ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಳ್ಳಬೇಕು.

**"Cash payment" ಆಯ್ಕೆ ಮಾಡಿಕೊಂಡರೆ.**

- UNION BANK OF INDIA (CORPORATION BANK), BANGALORE-ONE, KARNATAKA-ONE ಇವುಗಳಲ್ಲಿ ಯಾವುದಾದರೂ ಒಂದನ್ನು ಆಯ್ಕೆ ಮಾಡಿಕೊಂಡು Generate challan ಬಟನ್ ಕ್ಲಿಕ್ ಮಾಡಬೇಕು.
- ಚಲನ್‌ನಲ್ಲಿ ತಾವು ದಾಖಲಿಸಿದ ಮಾಹಿತಿ display ಆಗುತ್ತದೆ. ನಂತರ ಚಲನ್ ಪ್ರಿಂಟ್ ತೆಗೆದುಕೊಳ್ಳುವುದು.
- ಆಯ್ಕೆ ಮಾಡಿದ ಚಲನ್ ಪ್ರಿಂಟ್ ತೆಗೆದುಕೊಂಡು, ನಂತರ ಚಲನ್ ಮುಖಾಂತರ ಹಣವನ್ನು ಇಲಾಖೆಯು ನಿಗದಿಪಡಿಸಿದ ದಿನಾಂಕದೊಳಗೆ ಸಂದಾಯ ಮಾಡುವುದು. ಇಲಾಖೆಯು ನಿಗದಿಪಡಿಸಿರುವ ಕೊನೆಯ ದಿನಾಂಕದ ನಂತರ ಸಂದಾಯ ಮಾಡಲಾಗುವ ಚಲನ್/ ಆನ್‌ಲೈನ್ ಪಾವತಿಗಳನ್ನು ಕಡ್ಡಾಯವಾಗಿ ಪರಿಗಣಿಸಲಾಗುವುದಿಲ್ಲ ಎಂದು ಈ ಮೂಲಕ ಸ್ಪಷ್ಟಪಡಿಸಿದೆ.

- Cash payment ಮುಖಾಂತರ ಹಣ ಸಂದಾಯ ಮಾಡಿದ 5 ಗಂಟೆಗಳ ನಂತರ ತಾವು ನಮೂದಿಸಿದ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಸಂದೇಶ ಬರುತ್ತದೆ.

**"Online payment" ಆಯ್ಕೆ ಮಾಡಿಕೊಂಡರೆ:**

- Karnataka-one ಬಟನ್ ಕ್ಲಿಕ್ ಮಾಡುವುದು.
- ನೀವು ದಾಖಲಿಸಿದ ಮಾಹಿತಿ display ಆಗುತ್ತದೆ.
- "pay now" ಬಟನ್ ಕ್ಲಿಕ್ ಮಾಡುವುದು.
- Karnataka-one ಪುಟದಲ್ಲಿ continue for payment ಆಯ್ಕೆ ಮಾಡುವುದು.
- ಇದರಲ್ಲಿ "Terms and conditions" ಕಡ್ಡಾಯವಾಗಿ ಓದಿ "check box" ಅನ್ನು ಕ್ಲಿಕ್ ಮಾಡುವುದು.
- continue for payment ಆಯ್ಕೆ ಮಾಡುವುದು.
- ನಂತರ "pay now" ಕ್ಲಿಕ್ ಮಾಡುವುದು.
- Processing ಆಗುವವರೆಗೆ "Back button"/ "Close button" ಅಥವಾ "Refresh button"ಗಳನ್ನು ಒತ್ತಬೇಡಿ.
- "Online payment" ಮುಖಾಂತರ ಹಣ ಸಂದಾಯ ಆದ ನಂತರ ನೀವು ನಮೂದಿಸಿದ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಸಂದೇಶ ಬರುತ್ತದೆ.
- SMS ಸಂದೇಶ ಬಾರದಿದ್ದಲ್ಲಿ ಹಣ ಸಂದಾಯಿಸಿದ Karnataka-oneಅನ್ನು ಕೂಡಲೇ ಸಂಪರ್ಕಿಸಿ.

6. Scanned copy ಗೆ Apply ಮಾಡಿದ ನಂತರ ಕೂಡಲೇ Challan Generate ಆಗುತ್ತದೆ. ವಿದ್ಯಾರ್ಥಿಯು ಅದೇ ಚಲನ್ ಸಂಖ್ಯೆಯನ್ನು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಉಪಯೋಗಿಸುವಂತಿಲ್ಲ. ಮರುಮೌಲ್ಯಮಾಪನಕ್ಕೆ ಪ್ರತ್ಯೇಕ Challan Generate ಮಾಡಿಕೊಳ್ಳಬೇಕು.
7. Scanned copy ಗೆ ಮತ್ತು ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿಗಳು/ ಪೋಷಕರು ಅವರ ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು. ಇಲಾಖೆಯು ಅದೇ ಮೊಬೈಲ್ ಸಂಖ್ಯೆಗೆ OTP(One Time Password) ಕಳುಹಿಸುತ್ತದೆ. ಇದಲ್ಲದೆ ಸದರಿ ಮೊಬೈಲ್ ಸಂಖ್ಯೆಯು ಈ ಪ್ರಕ್ರಿಯೆ ಮುಕ್ತಾಯವಾಗುವವರೆಗೆ ಚಾಲ್ತಿಯಲ್ಲಿರತಕ್ಕದ್ದು.
8. ವಿದ್ಯಾರ್ಥಿಯ ಪ್ರತಿ ಮತ್ತು ಬ್ಯಾಂಕ್ ಪ್ರತಿಯನ್ನೊಳಗೊಂಡ ಎರಡು ಭಾಗಗಳಿರುವ ಚಲನ್ ಡೌನ್‌ಲೋಡ್ ಮಾಡಿಕೊಂಡು ನಿಗದಿಪಡಿಸಿರುವ ಶುಲ್ಕವನ್ನು ಆಯ್ಕೆ ಮಾಡಿಕೊಂಡಿರುವ ಬ್ಯಾಂಕ್ ಮುಖಾಂತರ ಪಾವತಿ ಮಾಡಿದ ನಂತರ Challan ಸಂಖ್ಯೆಯನ್ನು ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೂ ಬಳಸಿಕೊಳ್ಳಬೇಕಾಗಿರುವುದರಿಂದ ಅಭ್ಯರ್ಥಿಗಳು ಈ ಸಂಖ್ಯೆಯನ್ನು ನೆನಪಿನಲ್ಲಿಟ್ಟುಕೊಳ್ಳುವುದು.
9. Scanned ಉತ್ತರ ಪತ್ರಿಕೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ UPLOAD ಮಾಡಿದ ಕೂಡಲೇ ವಿದ್ಯಾರ್ಥಿಯು ನೀಡಿರುವ ಮೊಬೈಲ್ ಸಂಖ್ಯೆಗೆ ಸಂದೇಶ ರವಾನೆಯಾಗುತ್ತದೆ.
10. UPLOAD ಮಾಡಲಾದ Scanned ಉತ್ತರ ಪತ್ರಿಕೆಗಳು ಇಲಾಖಾ ವೆಬ್‌ಸೈಟ್‌ನಲ್ಲೂ ಸಹ ಲಭ್ಯವಿರುತ್ತವೆ.
11. ಸಂದೇಶ ಸ್ವೀಕರಿಸಿದ ವಿದ್ಯಾರ್ಥಿಗಳು ಈ ಮೊದಲೇ ನೀಡಲಾದ ಚಲನ್ ಸಂಖ್ಯೆಯನ್ನು ಬಳಸಿ Answer paper Scanned copyಯನ್ನು ದಿನಾಂಕ:06/07/2022 ರಿಂದ 10/07/2022ರೊಳಗೆ ಡೌನ್‌ಲೋಡ್ ಮಾಡಿಕೊಳ್ಳಬೇಕು.

12.Scanned copyಯನ್ನು Download ಮಾಡಿಕೊಳ್ಳಲು ಅನುಸರಿಸಬೇಕಾದ ಕ್ರಮಗಳು

- Scanned copy ಗಾಗಿ ಶುಲ್ಕ ಪಾವತಿಸಿರುವ ಚಲನ್ ಸಂಖ್ಯೆಯನ್ನು Enter ಮಾಡಿ Submit ಮಾಡುವುದು.
- Submit ಮಾಡಿದ ನಂತರ ನೀವು Scanned copy ಗೆ Apply ಮಾಡುವಾಗ ನೀಡಿರುವ ಮೊಬೈಲ್ ಸಂಖ್ಯೆಗೆ OTP ಕಳುಹಿಸಲಾಗುವುದು.
- ನಂತರ ವಿದ್ಯಾರ್ಥಿಯ ನೋಂದಣಿ ಸಂಖ್ಯೆ ಮತ್ತು ಶುಲ್ಕ ಪಾವತಿಸಿರುವ ವಿಷಯಗಳು Display ಆಗುತ್ತವೆ ತಮಗೆ ಬೇಕಾದ ಭಾಷೆ/ ವಿಷಯವನ್ನು(Subject) ಆಯ್ಕೆ ಮಾಡಿಕೊಳ್ಳಬೇಕು.
- Scanned copy ಯನ್ನು Download ಮಾಡಿಕೊಳ್ಳಬೇಕು.
- Scanned copyಗೆ Apply ಮಾಡುವಾಗ ಚಾಲನೆಯಲ್ಲಿರುವ ಮೊಬೈಲ್ ಸಂಖ್ಯೆಯನ್ನು ಮಾತ್ರ ಉಪಯೋಗಿಸತಕ್ಕದ್ದು.

ಉತ್ತರ ಪತ್ರಿಕೆಗಳ ಅಂಕಗಳ ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ:13–07–2022.

## <u>II ಮರುಎಣಿಕೆಗಾಗಿ (Re-totalling) ಅರ್ಜಿ ಸಲ್ಲಿಸಲು ಅನುಸರಿಸಬೇಕಾದ ಕ್ರಮಗಳು:</u>

1. ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್ಡ್ ಪ್ರತಿಯನ್ನು ಪಡೆದುಕೊಂಡು ಪರಿಶೀಲಿಸಿದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸ ಕಂಡು ಬಂದಲ್ಲಿ ಮಾತ್ರ ಮರುಎಣಿಕೆಗಾಗಿ (Re-totalling)_ಅರ್ಜಿ ಸಲ್ಲಿಸಬೇಕು.
2. ಮರುಎಣಿಕೆಗೆ ಅರ್ಜಿ ಶುಲ್ಕ ಪಾವತಿಸುವಂತಿಲ್ಲ.
3. ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್ಡ್ ಪ್ರತಿ ಪಡೆಯಲು ಅನುಸರಿಸಿದ ಕ್ರಮವನ್ನೇ ಮರುಮೌಲ್ಯಮಾಪನಕ್ಕೂ ಅನುಸರಿಸುವುದು. ಆದರೆ ಮರುಎಣಿಕೆಗೆ ಚಲನ್ ಡೌನ್‌ಲೋಡ್ ಮಾಡುವ ಅವಶ್ಯಕತೆ ಇರುವುದಿಲ್ಲ. ಮುಂದಿನ ಉಪಯೋಗಕ್ಕಾಗಿ ಮತ್ತು ವಿದ್ಯಾರ್ಥಿಯ ಮಾಹಿತಿಗಾಗಿ ಚಲನ್ ಸಂಖ್ಯೆಯನ್ನು ವಿದ್ಯಾರ್ಥಿಯು ಒದಗಿಸಿದ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮೂಲಕ ಕಳುಹಿಸಲಾಗುವುದು.
4. ಮರುಎಣಿಕೆ ಫಲಿತಾಂಶವನ್ನು ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.
5. ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವವರು ಮರುಎಣಿಕೆಗೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ.

## <u>III ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅನುಸರಿಸಬೇಕಾದ ಕ್ರಮಗಳು:</u>

1. scanned Copyಯನ್ನು ಪಡೆದುಕೊಂಡು ಪರಿಶೀಲಿಸಿದ ನಂತರವೇ ಮರುಮೌಲ್ಯಮಾಪನಕ್ಕಾಗಿ(Re-valuation) ಅರ್ಜಿ ಸಲ್ಲಿಸಬೇಕು.
2. ಮರುಮೌಲ್ಯಮಾಪನದಲ್ಲಿ ನಿಗದಿಪಡಿಸಿರುವ ಅಂಕಗಳಿಂತ ಹೆಚ್ಚಿನ ಅಂಕಗಳು ಅಥವಾ ಕಡಿಮೆ ಅಂಕಗಳು (–/+6%) ಬಂದಲ್ಲಿ ಬದಲಾವಣೆಯಾದ ಅಂಕಗಳೊಂದಿಗೆ ಫಲಿತಾಂಶವನ್ನು ಪರಿಷ್ಕರಿಸಿ ಪ್ರಕಟಿಸಲಾಗುವುದು. Karnataka Pre-university course S.L.P.E. Rule-1997, 29(ಅ) ಅನ್ವಯ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗೆ ಮೊದಲು ಪಡೆದ ಅಂಕಗಳನ್ನು ಮರುಸ್ಥಾಪಿಸಲು ಅವಕಾಶವಿರುವುದಿಲ್ಲ.
3. ಮರುಮೌಲ್ಯಮಾಪನದಲ್ಲಿ (–/+6%) ಅಂಕಗಳಿಂದ ಕಡಿಮೆ ಅಂಕಗಳು ಬಂದಲ್ಲಿ ಸದರಿ ಅಂಕಗಳನ್ನು ಪರಿಗಣಿಸುವುದಿಲ್ಲ ಹಾಗೂ ಫಲಿತಾಂಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

4. ಮರುಮೌಲ್ಯಮಾಪನದ ಬಗ್ಗೆ ಮರುಮೌಲ್ಯಮಾಪಕರು ತೆಗೆದುಕೊಂಡ ನಿರ್ಧಾರವೇ ಅಂತಿಮವಾಗಿದ್ದು, ಇದರ ಮೇಲೆ ಮರು ಪರಿಶೀಲನೆ ಅಥವಾ ಮೇಲ್ಮನವಿ ಸಲ್ಲಿಸಲು ಅವಕಾಶವಿರುವುದಿಲ್ಲ.
5. ಸ್ಕ್ಯಾನ್ಡ್ ಪ್ರತಿ ಪಡೆಯಲು ಅನುಸರಿಸಿದ ಕ್ರಮವನ್ನೇ ಮರುಮೌಲ್ಯಮಾಪನಕ್ಕೂ (Re-valuation) ಅನುಸರಿಸುವುದು.
6. Application details ನಲ್ಲಿ ವಿದ್ಯಾರ್ಥಿಯು ತಮ್ಮ ಬ್ಯಾಂಕ್ ಖಾತೆಯ ಮಾಹಿತಿಯನ್ನು ಭರ್ತಿ ಮಾಡುವುದು.
7. ಮರುಮೌಲ್ಯಮಾಪನ / ಮರುಎಣಿಕೆ ಕಾರ್ಯ ಮುಗಿದ ನಂತರ ಫಲಿತಾಂಶವನ್ನು ಇಲಾಖೆಯ ವೆಬ್‌ಸೈಟ್ www.pue.karnataka.gov.in ನ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.
8. 2022ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ಮರುಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್ಡ್ ಪ್ರತಿ ಪಡೆಯಲು ಮರುಮೌಲ್ಯಮಾಪನ ಮತ್ತು ಮರುಎಣಿಕೆಗಾಗಿ ಅರ್ಜಿ ಸಲ್ಲಿಸುವ ಬಗ್ಗೆ ಇಲಾಖಾ ವೆಬ್‌ಸೈಟ್ www.pue.karnataka.gov.in ನ ಅಂತರ್ಜಾಲದಲ್ಲಿ ಪ್ರಕಟಿಸಿರುವ ಸುತ್ತೋಲೆಯನ್ನು ವೀಕ್ಷಿಸಬಹುದಾಗಿದೆ.

16/6

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

**ಕ್ರಮಕ್ಕಾಗಿ**

1. ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ.
(ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಸಹಾಯಕ ನಿರ್ದೇಶಕರು, ಇ–ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ.
(ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)

**ಪ್ರತಿಯನ್ನು ಗೌರವಪೂರಕವಾಗಿ ಮಾಹಿತಿಗಾಗಿ ಸಲ್ಲಿಸಿದೆ:**

1. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಸದರಿ ಮಾಹಿತಿಯನ್ನು ಮಾನ್ಯ ಸಚಿವರ ಅವಗಾಹನೆಗೆ ತರಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ) ಇವರಿಗೆ ಮಾಹಿತಿಗಾಗಿ.
3. ಕಛೇರಿ ಪ್ರತಿ